ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ

ರಾಜಾಜಿನಗರ, ಕೈಗಾರಿಕಾ ವಸಾಹತು,
ಬೆಂಗಳೂರು–560 010

ಸಂಖ್ಯೆ:ಜಿಟಿಟಿಸಿ/ಆಡಳಿತ/ನೇ.ನೇ/ಬ್ಯಾ.ಲಾ/2026–27 ದಿನಾಂಕ: 17–11–2026

ನೇಮಕಾತಿ ಅಧಿಸೂಚನೆ

ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರದಲ್ಲಿ ನೇರ ನೇಮಕಾತಿ ಬ್ಯಾಕ್‌ಲಾಗ್‌ನ್ನು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ಸೇರಿದ ಅರ್ಹ ಅಭ್ಯರ್ಥಿಗಳಿಂದ ಭರ್ತಿ ಮಾಡಲು ಅರ್ಜಿಗಳನ್ನು ಆಹ್ವಾನಿಸಿದೆ. ಹುದ್ದೆಗಳ ವಿವರ ಮತ್ತು ವಿದ್ಯಾರ್ಹತೆಯನ್ನು ಕೆಳಗೆ ಪಟ್ಟಿ ಮಾಡಿ ನೀಡಲಾಗಿದೆ.

ಕ್ರ.ಸಂ	ವೃಂದ & ವೇತನ ಶ್ರೇಣಿ	ಒಟ್ಟು ಹುದ್ದೆಗಳ ಸಂಖ್ಯೆ	ಪರಿಶಿಷ್ಟ ಜಾತಿ	ಪರಿಶಿಷ್ಟ ಪಂಗಡ	ಶೈಕ್ಷಣಿಕ ವಿದ್ಯಾರ್ಹತೆ
1	ಸಹಾಯಕ ಪ್ರಾಧ್ಯಾಪಕರು ರೂ.107500–167200	1	1 SC	–	1) Candidates should possess Ph.D degree with first class at Bachelor's or Master's degree Level. 2)Candidates must possess Bachelor degree in Mechanical/Production/Industrial & Production Engineering/Technology. AND 3)Master's Degree in Tool Engineering/Machine Design/Mechanical Engineering/Product Design /Machine Design & Robotics/ Engineering /Technology 4)Candidates must have 10 years of experience – (a) in teaching of which 5 years must be at the level of Assistant professor and/or equivalent, or (b) in Industiry, or (c) in Research work. <u>Note:</u> Candidates from industry/profession with Masters degree in Engineering/Technology mentioned above and with professional work which is significant and can be recognised as equivalent to Ph.D degree and with 10 years experience

					a senior level comparable to that of an Assistant Professor will also be eligible.
3	ಸಹಾಯಕ ವ್ಯವಸ್ಥಾಪಕರು ರೂ.83700–155200	3	2 SC-Others-1 SC-W-1	1 ST	(i) For direct recruitment: Qualification: a) Should possess a degree in Mechanical Engineering /Production Engineering with Post Graduation in Tooling being preferred. b) Proficiency in computers, as determined from time to time through GTTC Office Order. Experience: Minimum of 5 years experience in a reputed Tool Room or Press Shop or Plastic Moulding Shop or Die Casting foundry.
4	ಸಹಾಯಕ ದರ್ಜೆ–2 ರೂ.44425–83700	3	2 SC-Others-1 SC-W-1	1 ST	i) For direct recruitment: Qualification (except Security): a) Degree in Arts/ Commerce/ Science/ DBM/ Diploma in Secretarial Practice/Commercial Practice/Modern Office Practice b) Proficiency in computers, as determined from time to time through GTTC Office Order.
	ಒಟ್ಟು	**7**	**5**	**2**	

1) **ವಯೋಮಿತಿ:** ಮೇಲಿನ ಪಟ್ಟಿಯಲ್ಲಿ ನಮೂದಿಸಿರುವ ವಿವಿಧ ಹುದ್ದೆಗಳಿಗೆ ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಗಳು ಕೆಳಕಂಡ ಕನಿಷ್ಟ ವಯೋಮಿತಿಯನ್ನು ಹೊಂದಿರತಕ್ಕದ್ದು ಮತ್ತು ಗರಿಷ್ಟ ವಯೋಮಿತಿಯನ್ನು ಮೀರಿರಬಾರದು.

ಕ್ರ.ಸಂ	ಹುದ್ದೆಗಳು	**ವಯೋಮಿತಿ: ದಿನಾಂಕ 29–01–2026 ರ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 262 ಸೇನೆನಿ 2025 ರ ಪ್ರಕಾರ**
1	ಸಹಾಯಕ ಪ್ರಾಧ್ಯಾಪಕರು	ಕನಿಷ್ಟ – 21 ವರ್ಷ ಗರಿಷ್ಟ – 50 ವರ್ಷ
2	ಸಹಾಯಕ ವ್ಯವಸ್ಥಾಪಕರು	ಕನಿಷ್ಟ – 21 ವರ್ಷ ಗರಿಷ್ಟ – 40 ವರ್ಷ
3	ಸಹಾಯಕ ದರ್ಜೆ–2	ಕನಿಷ್ಟ – 18 ವರ್ಷ ಗರಿಷ್ಟ – 37 ವರ್ಷ

2) **ಅರ್ಜಿ ಸಲ್ಲಿಸುವ ವಿಧಾನ:** ಅಭ್ಯರ್ಥಿಗಳು ಅರ್ಜಿಗಳನ್ನು ನಿಗದಿತ ನಮೂನೆಯಲ್ಲಿ ಆನ್‌ಲೈನ್ ಮೂಲಕ ಜಿಟಿಟಿಸಿ ಜಾಲತಾಣ https://gttc.karnataka.gov.in ನಲ್ಲಿ ಸಲ್ಲಿಸತಕ್ಕದ್ದು. ಒಂದಕ್ಕಿಂತ ಹೆಚ್ಚು ಹುದ್ದೆಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಪ್ರತ್ಯೇಕವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು ಅರ್ಜಿಯ ಜೊತೆಗೆ ರೂ.500/– ಗಳ ಶುಲ್ಕಗಳನ್ನು ಆನ್‌ಲೈನ್ ಮೂಲಕ ಪಾವತಿಸತಕ್ಕದ್ದು. ಪ್ರತಿ ಅರ್ಜಿಗೆ ಪ್ರತ್ಯೇಕ ಶುಲ್ಕವನ್ನು ಪಾವತಿಸ ತಕ್ಕದ್ದು.

ಅರ್ಜಿಯ ಜೊತೆಯಲ್ಲಿ ವಿದ್ಯಾರ್ಹತೆ, ಅನುಭವ, ಜಾತಿ ಪ್ರಮಾಣ ಪತ್ರ ಇತ್ಯಾದಿಗಳನ್ನು ದೃಢೀಕರಿಸಿ ಸಲ್ಲಿಸ ತಕ್ಕದ್ದು. ಪಾವತಿಸಿದ ಶುಲ್ಕವನ್ನು ಯಾವುದೇ ಕಾರಣಕ್ಕೂ ಹಿಂದಿರುಗಿಸಲಾಗುವುದಿಲ್ಲ. ಅಭ್ಯರ್ಥಿಗಳು ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಿದ ನಂತರ ಅದರ ಪ್ರತಿಯನ್ನು ಅರ್ಜಿಯೊಂದಿಗೆ ಸಲ್ಲಿಸಿದ ದಾಖಲೆಗಳ ಪ್ರತಿಗಳೊಂದಿಗೆ ವ್ಯವಸ್ಥಾಪಕ ನಿರ್ದೇಶಕರು, ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ, ಕೈಗಾರಿಕಾ ವಸಾಹತು, ರಾಜಾಜಿನಗರ, ಬೆಂಗಳೂರು–560 010 ಇವರಿಗೆ ಸಲ್ಲಿಸತಕ್ಕದ್ದು.

3) **ಅರ್ಜಿಯನ್ನು ಸಲ್ಲಿಸಲು ಕೊನೆಯ ದಿನಾಂಕ : 11–12–2026 ರಂದು ಸಂಜೆ 5:30 ರೊಳಗೆ ಸಲ್ಲಿಸತಕ್ಕದ್ದು.**

4) **ಆಯ್ಕೆ ವಿಧಾನ:** ಸಹಾಯಕ ಪ್ರಾಧ್ಯಾಪಕರು, ಸಹಾಯಕ ವ್ಯವಸ್ಥಾಪಕ ಮತ್ತು ಸಹಾಯಕ ದರ್ಜೆ–2 ವೃಂದಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ಸೇರಿದ ನೇರ ನೇಮಕಾತಿ ಬ್ಯಾಕ್‌ಲಾಗ್ ಹುದ್ದೆಗಳನ್ನು ದಿನಾಂಕ 22–11–2001 ರಂದು, ಅಂದರೆ Karnataka State Civil Services (Unfilled Vacancies Reserved for the persons belonging to the Scheduled Castes and the Scheduled Tribes) (Special Recruitment) Rules, 2001 ಜಾರಿಗೆ ಬಂದ ದಿನಾಂಕದಂದು ಲಭ್ಯವಿದ್ದವೆಂದು ಗುರುತಿಸಿರುವ ಕಾರಣ, ಸದರಿ ಬ್ಯಾಕ್‌ಲಾಗ್‌ನ್ನು 2001 ರ ನಿಯಮಗಳ ನಿಯಮ 6 ರನ್ವಯ ಅಭ್ಯರ್ಥಿಗಳನ್ನು 18 ರಿಂದ 29 ವರ್ಷದ ಒಂದು ಗುಂಪು ಮತ್ತು 29 ರಿಂದ ಗರಿಷ್ಟ ವಯೋಮಿತಿಯ (ಕ್ರ.ಸಂ. (1) ರಲ್ಲಿ ತಿಳಿಸಿರುವಂತೆ) ವರೆಗಿನ ಅಭ್ಯರ್ಥಿಗಳನ್ನು ಮತ್ತೊಂದು ಗುಂಪನ್ನಾಗಿ ವರ್ಗೀಕರಣ ಮಾಡಿ, ಸದರಿ ನಿಯಮದಲ್ಲಿ ನಿಗದಿಪಡಿಸಿರುವ ಕಾರ್ಯ ವಿಧಾನವನ್ನು ಅನುಸರಿಸಿ ಭರ್ತಿ ಮಾಡಲಾಗುವುದು.

5) **ಅರ್ಹತಾ ಷರತ್ತುಗಳು–**

(ಅ) ಭಾರತೀಯ ನಾಗರೀಕನಾಗಿರತಕ್ಕದ್ದು.

(ಆ) ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಪತ್ನಿ ಇರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯರ್ಥಿಯು ನೇಮಕಾತಿಗೆ ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ನೇಮಕಾತಿಗೆ ಅರ್ಹರಾಗುವುದಿಲ್ಲ.

(ಇ) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.

(ಈ) ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ನೇಮಕಾತಿ ಪ್ರಾಧಿಕಾರವು ಕಾಯ್ದಿರಿಸಿಕೊಂಡಿದೆ ಮತ್ತು ನೇಮಕಾತಿ ಪ್ರಾಧಿಕಾರದ ವಿವೇಚನೆಯು ಯಾವುದೇ ವಿಧದಲ್ಲೂ ಈ ನಿಯಮಗಳ ಮೂಲಕ ಸೀಮಿತವಾಗಿರುವುದಿಲ್ಲ.

(ಉ) ಕೇಂದ್ರ ಅಥವಾ ಕರ್ನಾಟಕ ಅಥವಾ ಇತರೆ ರಾಜ್ಯದ ಲೋಕ ಸೇವಾ ಆಯೋಗ ಅಥವಾ **ಕರ್ನಾಟಕ ಪರೀಕ್ಷಾ ಪ್ರಾಧಿಕಾರ** ಅಥವಾ ಯಾವುದೇ ವಿಶ್ವವಿದ್ಯಾನಿಲಯಗಳಿಂದ ನಡೆಸಲಾಗುವ ಪರೀಕ್ಷೆಗಳಿಂದ ಅಥವಾ ನೇಮಕಾತಿಗಳಿಂದ ಖಾಯಂ ಆಗಿ ಡಿಬಾರ್ ಆದ ವ್ಯಕ್ತಿಗಳು ನೇಮಕಾತಿಗೆ ಅರ್ಹರಾಗುವುದಿಲ್ಲ.

(ಊ) ನೈತಿಕತೆಗೆ ಸಂಬಂಧಿಸಿದಂತೆ ಶಿಕ್ಷೆಗೆ ಒಳಪಟ್ಟ ಯಾವುದೇ ವ್ಯಕ್ತಿ ಅಥವಾ **ಕೇಂದ್ರ ಅಥವಾ ಕರ್ನಾಟಕ ಅಥವಾ ಇತರೆ ರಾಜ್ಯದ ಲೋಕಸೇವಾ ಆಯೋಗ** ಅಥವಾ **ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಅಥವಾ ಯಾವುದೇ ವಿಶ್ವವಿದ್ಯಾನಿಲಯಗಳಿಂದ** ನಡೆಸಲಾಗುವ ಪರೀಕ್ಷೆಗಳಿಂದ, ಅಥವಾ ನೇಮಕಾತಿಗಳಿಂದ ತಾತ್ಕಾಲಿಕವಾಗಿ ಡಿಬಾರ್ ಆದ ಅಥವಾ ಅನರ್ಹಗೊಂಡ ವ್ಯಕ್ತಿಯು, ನೇಮಕಾತಿ ಪ್ರಾಧಿಕಾರವು ಎಲ್ಲಾ ಸಂದರ್ಭಗಳನ್ನು ಮರು ಪರಿಶೀಲಿಸಿ ಅವರು ನೇಮಕಾತಿಗೆ ಅರ್ಹರೆಂದು ಪರಿಗಣಿಸುವವರೆಗೂ ನೇಮಕಾತಿಗೆ ಅರ್ಹರಾಗುವುದಿಲ್ಲ.

ಮೇಲ್ಕಂಡ ಅನರ್ಹತೆಗಳನ್ನು ಹೊಂದಿರದ ಅಭ್ಯರ್ಥಿಗಳು ಮತ್ತು ನಿಗದಿತ ಶೈಕ್ಷಣಿಕ ವಿದ್ಯಾರ್ಹತೆಯನ್ನು ಹೊಂದಿರುವ ಅಭ್ಯರ್ಥಿಗಳು ನೇಮಕಾತಿ ಗೆಅರ್ಜಿ ಸಲ್ಲಿಸಲು ಅರ್ಹತೆಯನ್ನು ಹೊಂದಿರುತ್ತಾರೆ.

6) **ಜಾತಿ / ಮೀಸಲಾತಿ ಪ್ರಮಾಣ ಪತ್ರ**

ಅಭ್ಯರ್ಥಿಗಳು ಸರ್ಕಾರ ನಿಗದಿಪಡಿಸಿರುವ ನಮೂನೆಯಲ್ಲಿ ಸಕ್ಷಮ ಪ್ರಾಧಿಕಾರದಿಂದ ಜಾತಿ ಪ್ರಮಾಣ ಪತ್ರವನ್ನು ಪಡೆದು ಸಲ್ಲಿಸತಕ್ಕದ್ದು.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಮತ್ತು ಮೀಸಲಾತಿ ಪ್ರಮಾಣ ಪತ್ರಗಳು ರದ್ದಾಗುವವರೆಗೂ ಚಾಲ್ತಿಯಲ್ಲಿರುವುದರಿಂದ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ನಿಗದಿಪಡಿಸಿದ ನಮೂನೆಯಲ್ಲಿ ಪಡೆದಿಟ್ಟುಕೊಂಡಿರ ತಕ್ಕದ್ದು. ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು.

7) ಜಿಟಿಟಿಸಿ ಪತ್ರ ವ್ಯವಹಾರ:

ಕೇಂದ್ರವು ಅಭ್ಯರ್ಥಿಗಳೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸುವುದಿಲ್ಲ. ಆದುದರಿಂದ, ಅಭ್ಯರ್ಥಿಗಳು ಅರ್ಜಿ ಭರ್ತಿ ಮಾಡುವಾಗ ಜಾಗರೂಕತೆಯಿಂದ ಭರ್ತಿ ಮಾಡತಕ್ಕದ್ದು. ವಿಳಾಸ ಬದಲಾವಣೆ ಇದ್ದಲ್ಲಿ ಮಾತ್ರ ಅಭ್ಯರ್ಥಿಗಳು ಲಿಖಿತ ಮನವಿಯ ಮೂಲಕ ಕೇಂದ್ರದ ಗಮನಕ್ಕೆ ತರತಕ್ಕದ್ದು. ಈ ವಿಳಾಸ ಬದಲಾವಣೆಯನ್ನು ಪರಿಗಣಿಸಲು ಕೇಂದ್ರವು ಪ್ರಯತ್ನಿಸುವುದು. ಆದಾಗ್ಯೂ ಈ ವಿಚಾರದಲ್ಲಿ ಕೇಂದ್ರವು ಯಾವುದೇ ಜವಾಬ್ದಾರಿಯನ್ನು ವಹಿಸಿಕೊಳ್ಳುವುದಿಲ್ಲ. ಈ ಬಗ್ಗೆ ಅಭ್ಯರ್ಥಿಗಳು ಎಚ್ಚರ ವಹಿಸತಕ್ಕದ್ದು. ಅಭ್ಯರ್ಥಿಗಳು ಕೇಂದ್ರದೊಡನೆ ಸಂಪರ್ಕಿಸಲೇಬೇಕಾದ ಸಂದರ್ಭದಲ್ಲಿ ತಮ್ಮ ಮನವಿಯಲ್ಲಿ ಅಭ್ಯರ್ಥಿಯ ಪೂರ್ಣ ಹೆಸರು ನೇಮಕಾತಿ ಬಯಸಿ ಅರ್ಜಿ ಸಲ್ಲಿಸಿದ ಹುದ್ದೆ, ಅಭ್ಯರ್ಥಿಯ ಅಂಚೆ ವಿಳಾಸವನ್ನು ತಪ್ಪದೇ ನಮೂದಿಸತಕ್ಕದ್ದು.

8) ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: ಕೇಂದ್ರ ಕಛೇರಿಯ ಮಾಹಿತಿ ಕೇಂದ್ರ: **080–23384303**

9) ದುರ್ನಡತೆ:– ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆ ಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಪರೀಕ್ಷೆಯಲ್ಲಿ / ಸಂದರ್ಶನದಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವನೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು, ಕಂಡು ಬಂದಲ್ಲಿ ಅವನು / ಅವಳು ಸ್ವತ: ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ; ಹುದ್ದೆಯ ಆಯ್ಕೆಯಿಂದ ಅಭ್ಯರ್ಥಿತನವನ್ನು ರದ್ದುಪಡಿಸಲಾಗುವುದು.

10) ಗಮನಿಸಿ:

1) ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವುದು, ಅಭ್ಯರ್ಥಿಗಳು ಅರ್ಜಿ ಸಲ್ಲಿಸಿದ ಮಾತ್ರಕ್ಕೆ ಅವರುಗಳು ಮೇಲಿನ ವಿವಿಧ ಹುದ್ದೆಗಳ ನೇಮಕಾತಿಗೆ ಯಾವುದೇ ಹಕ್ಕನ್ನು ತಂದುಕೊಡುವುದಿಲ್ಲ. ನೇಮಕಾತಿಯು ಜಿಟಿಟಿಸಿ ಕೇಂದ್ರವು ನಿಗದಿಪಡಿಸಿರುವ/ನಿಗದಿಪಡಿಸಬಹುದಾದ ಅರ್ಹತಾ ಮಾನದಂಡಗಳಿಗೆ ಒಳಪಟ್ಟಿರುತ್ತದೆ.

2) ಮೇಲಿನ ಯಾವುದೇ ನಿಯಮಗಳು / ಕಾರ್ಯವಿಧಾನಗಳಿಗೆ ಸಂಬಂಧಿಸಿದಂತೆ ವ್ಯತ್ಯಾಸ ಅಥವಾ ಅಸ್ಪಷ್ಟತೆ ಕಂಡು ಬಂದಲ್ಲಿ, ಕರ್ನಾಟಕ ನಾಗರೀಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು, 1977, ಕರ್ನಾಟಕ ನಾಗರೀಕ ಸೇವಾ (ನೇರ ನೇಮಕಾತಿ) (ಸಾಮಾನ್ಯ) ನಿಯಮಗಳು 2021 ಮತ್ತು ಜಿಟಿಟಿಸಿ (ವೃಂದ, ನೇಮಕಾತಿ ಮತ್ತು ಕೆಲವು ಸೇವಾ ಷರತ್ತುಗಳು) ನಿಯಮಗಳು, 2000 ರಲ್ಲಿ ನಿಗದಿಪಡಿಸಿರುವ ಉಪಬಂಧಗಳು ಅನ್ವಯಿಸುತ್ತದೆ.

ಸಹಿ/–
ವ್ಯವಸ್ಥಾಪಕ ನಿರ್ದೇಶಕರು

ಪ.ಜಾ / ಪ.ಪಂ ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

ನಮೂನೆ – ಡಿ (ನಿಯಮ 3ಎ (2) (3) ನೋಡಿ)

ಅನುಸೂಚಿತ ಜಾತಿ ಅಥವಾ ಅನುಸೂಚಿತ ಬುಡಕಟ್ಟುಗಳಿಗೆ (ಪ.ಜಾ/ಪ.ಪಂ) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರ

..... ರಾಜ್ಯದ / ಕೇಂದ್ರಾಡಳಿತ ಪ್ರದೇಶದ * ..... ಜಿಲ್ಲೆಯ / ವಿಭಾಗದ ..... ಗ್ರಾಮ / ಪಟ್ಟಣದ * ನಿವಾಸಿಯಾದ ಶ್ರೀ / ಶ್ರೀಮತಿ ..... ಎಂಬುವವರ ಮಗ /ಮಗಳಾದ ಶ್ರೀ / ಶ್ರೀಮತಿ ..... ಇವರು ಅನುಸೂಚಿತ ಜಾತಿ/ಅನುಸೂಚಿತ ಬುಡಕಟ್ಟು * ಎಂದು ಮಾನ್ಯ ಮಾಡಲಾಗಿರುವ ಜಾತಿ /ಬುಡಕಟ್ಟಿಗೆ * ಸೇರಿರುತ್ತಾರೆಂದು ಪ್ರಮಾಣೀಕರಿಸಿದೆ.

◆ಸಂವಿಧಾನ (ಅನುಸೂಚಿತ ಜಾತಿಗಳು) ಆದೇಶ, 1950
◆ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) ಆದೇಶ, 1950
◆ಸಂವಿಧಾನ (ಅನುಸೂಚಿತ ಜಾತಿ) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1950
◆ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1951
(ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಪಟ್ಟಿ (ಮಾರ್ಪಾಡು) ಆದೇಶ 1956, ಮುಂಬಯಿ ತಾಜ್ಯ ಪುನರ್ ರಚನಾ ಅಧಿನಿಯಮ, 1960, ಪಂಜಾಬ್ ರಾಜ್ಯ ಪುನರ್ ರಚನಾ ಅಧಿನಿಯಮ, 1966, ಹಿಮಾಚಲ ಪ್ರದೇಶ ರಾಜ್ಯ ಅಧಿನಿಯಮ, 1970 ಮತ್ತು ಈಶಾನ್ಯ ಪ್ರದೇಶಗಳ (ಪುನರ್ ರಚನಾ ಅಧಿನಿಯಮ, 1971ರ ಮೂಲ ತಿದ್ದುಪಡಿಯಾದಂತೆ)
◆ಸಂವಿಧಾನ
◆ಸಂವಿಧಾನ (ಜಮ್ಮು ಮತ್ತು ಕಾಶ್ಮೀರ) ಅನುಸೂಚಿತ ಜಾತಿಗಳ ಆದೇಶ, 1956
◆ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ (ತಿದ್ದುಪಡಿ) ಅಧಿನಿಯಮ, 1976ರ ಮೂಲಕ
ತಿದ್ದುಪಡಿಯಾದಂತೆ ಸಂವಿಧಾನ (ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳ) ಅನುಸೂಚಿತ ಬುಡಕಟ್ಟುಗಳ ಆದೇಶ, 1959.
◆ಸಂವಿಧಾನ (ದಾದರ್ ಮತ್ತು ನಾಗರಹವೇಲಿ) ಅನುಸೂಚಿತ ಜಾತಿಗಳ ಆದೇಶ 1962
◆ಸಂವಿಧಾನ (ಪಾಂಡಿಚೇರಿ) ಅನುಸೂಚಿತ ಜಾತಿಗಳ ಆದೇಶ, 1964
◆ಸಂವಿಧಾನ (ಅನುಸೂಚಿತ ಬುಡಕಟ್ಟುಗಳ) (ಉತ್ತರ ಪ್ರದೇಶ) ಆದೇಶ, 1967
◆ಸಂವಿಧಾನ (ಗೋವಾ, ದಮನ್ ಮತ್ತು ದೀವ್) ಅನುಸೂಚಿತಜಾತಿ/ಬುಡಕಟ್ಟುಗಳ ಆದೇಶ 1988
◆ಸಂವಿಧಾನ (ನಾಗಾಲ್ಯಾಂಡ್) ಅನುಸೂಚಿತ ಬುಡಕಟ್ಟುಗಳ ಆದೇಶ

2. ಶ್ರೀ/ಶ್ರೀಮತಿ/ಕುಮಾರಿ * ..... ಮತ್ತು / ಅಥವಾ ಅವನ* / ಅವಳ* ಕುಟುಂಬವು .....ರಾಜ್ಯ / ಕೇಂದ್ರಾಡಳಿತ ಪ್ರದೇಶದ ..... ಜಿಲ್ಲಾ / ವಿಭಾಗದ .....ಗ್ರಾಮ / ಪಟ್ಟಣದ ಸಾಮಾನ್ಯ ನಿವಾಸಿ(ಗಳು)

ಸಹಿ.....
ತಹಶೀಲ್ದಾರ್.....
ಪದನಾಮ
ಕಛೇರಿಯ ಮೊಹರಿನೊಂದಿಗೆ

ಸ್ಥಳ:
ದಿನಾಂಕ:

ರಾಜ್ಯ / ಕೇಂದ್ರಾಡಳಿತ ಪ್ರದೇಶ ಅನ್ವಯವಾಗದಿರುವ ಪದಗಳನ್ನು ದಯವಿಟ್ಟು ಬಿಟ್ಟು ಬಿಡಿ / ಹೊಡೆದು ಹಾಕಿ

ಸೂಚನೆ: ಇಲ್ಲಿ ಉಪಯೋಗಿಸಿದ **'ಸಾಮಾನ್ಯ ನಿವಾಸಿಗಳು'** ಎಂಬ ಪದಾವಳಿಯು ಪ್ರಜಾ ಪ್ರಾತಿನಿಧ್ಯ ಅಧಿನಿಯಮ, 1950ರ 20ನೇ ಪ್ರಕರಣದಲ್ಲಿರುವ ಅರ್ಥವನ್ನೇ ಹೊಂದಿರುತ್ತದೆ. ಭಾರತ ಸರ್ಕಾರದ ಪತ್ರಸಂಖ್ಯೆ: ಬಿಸಿ 12028/2/76–ಎಸ್‌ಸಿಟಿ–1 ಗೃಹ ಮಂತ್ರಾಲಯ ಅನುಸಾರವಾಗಿ, ಅಂಥಪ್ರಮಾಣ ಪತ್ರಗಳನ್ನು ನೀಡಲು ಸಕ್ಷಮವಾಗಿರುವುದಕ್ಕಾಗಿ, ಭಾರತ ಸರ್ಕಾರದ (ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ) ಪತ್ರ ಸಂಖ್ಯೆ:13–2–74ಇಎಸ್‌ಟಿ (ಎಸ್‌ಸಿಟಿ) ದಿನಾಂಕ: 05.08.1975ರಲ್ಲಿ ನಮೂದಿಸಿದ ಪ್ರಾಧಿಕಾರಿಯು, ಸಂಬಂಧಪಟ್ಟ ಆದೇಶದ ಅಧಿಸೂಚನೆಯನ್ನು ಹೊರಡಿಸಿದ ಸಮಯದಲ್ಲಿ ಪ್ರಮಾಣ ಪತ್ರಕ್ಕಾಗಿ ಅರ್ಜಿ ಸಲ್ಲಿಸಿದ ವ್ಯಕ್ತಿಯು, ತನ್ನ ಖಾಯಂ ವಾಸ ಸ್ಥಳವನ್ನು ಹೊಂದಿದ್ದ ಸ್ಥಳಕ್ಕೆ ಸೇರಿದವರೊಬ್ಬರಾಗಿರತಕ್ಕದ್ದು. ಅದೇ ರೀತಿಯಲ್ಲಿ ಒಂದು ತಾಲ್ಲೂಕಿನ ರೆವಿನ್ಯೂ ಪ್ರಾಧಿಕಾರಿಯು ಇನ್ನೊಂದು ತಾಲ್ಲೂಕಿಗೆ ಸೇರಿದ ವ್ಯಕ್ತಿಗಳಿಗೆ ಸಂಬಂಧಪಟ್ಟ ಪ್ರಮಾಣ ಪತ್ರವನ್ನು ನೀಡಲು ಸಕ್ಷಮ ಪ್ರಾಧಿಕಾರಿಯಾಗುವುದಿಲ್ಲ.